ಶ್ರೀ ಎಸ್. ಎಂ. ಕೃಷ್ಣ (ಉಪಮುಖ್ಯಮಂತ್ರಿಗಳು):–

ಅ) ವರ್ಷ	ಯೋಜನೆಯ ಹೆಸರು	ಅಂದಾಜು ಮೊತ್ತ (ಕೋಟಿ ರೂ.ಗಳಲ್ಲಿ)
1989–90	ಯಾವುದೂ ಇಲ್ಲ	–
1990–91	ತುಂಗಾ ಮೇಲ್ದಂಡೆ ಯೋಜನೆ	271.42
1991–92	ರಾಮಥಾಲ್ ಏತ ನೀರಾವರಿ ಯೋಜನೆ	79.60

ಆ) ಮೇಲಿನ ಯೋಜನೆಗಳ ಪೈಕಿ ಯಾವುದೂ ಇಲ್ಲ

ಕಳ್ಳಂಬೆಳ್ಳ ಸಬ್‌ಸ್ಟೇಷನ್‌ಗೆ ಟ್ರಾನ್ಸ್‌ಫಾರ್ಮರ್

1186 (343): ಶ್ರೀ ಟಿ.ಬಿ. ಜಯಚಂದ್ರ (ಕಳ್ಳಂಬೆಳ್ಳ):–

ಮಾನ್ಯ ಉಪಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಶಿರಾ ತಾಲ್ಲೂಕಿನ ಕಳ್ಳಂಬೆಳ್ಳದಲ್ಲಿರುವ ಸಬ್ ಸ್ಟೇಷನ್‌ನಲ್ಲಿರುವ ಹಾಲಿ ಒಂದೇ ಟ್ರಾನ್ಸ್‌ಫಾರ್ಮರ್ ಓವರ್‌ಲೋಡ್ ಆಗುತ್ತಿದ್ದು ಟ್ರಿಪ್ ಆಗುವುದರಿಂದ ರೈತರಿಗೆ ತೊಂದರೆಯಾಗಿರುವುದು ಸರ್ಕಾರಕ್ಕೆ ತಿಳಿದಿದೆಯೇ ?

ಆ) ಇದೇ ಸ್ಟೇಷನ್ನಿನಲ್ಲಿ ಮತ್ತೊಂದು ಟ್ರಾನ್ಸ್‌ಫಾರ್ಮರ್ ಅಳವಡಿಸಿದಲ್ಲಿ ಈ ತೊಂದರೆಯನ್ನು ನಿವಾರಿಸಬಹುದೆಂಬ ಅಂಶ ಸರ್ಕಾರದ ಗಮನಕ್ಕೆ ಬಂದಿದೆಯೇ ?

ಇ) ಹಾಗಿದ್ದಲ್ಲಿ ಮತ್ತೊಂದು ಟ್ರಾನ್ಸ್‌ಫಾರ್ಮರನ್ನು ಅಳವಡಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು ?

ಶ್ರೀ ಎಸ್. ಎಂ. ಕೃಷ್ಣ (ಉಪಮುಖ್ಯಮಂತ್ರಿಗಳು):–

ಅ) ಹೌದು.

ಆ) ಹೌದು, ಬಂದಿದೆ.

ಇ) ಇನ್ನೊಂದು ಟ್ರಾನ್ಸ್‌ಫಾರ್ಮರನ್ನು ಅಳವಡಿಸಲು ಪ್ರಸ್ತಾವನೆಯನ್ನು ಮಂಡಳಿಯ ತಾಂತ್ರಿಕ ಸಮಿತಿಯ ಅನುಮೋದನೆಗಾಗಿ ಒಪ್ಪಿಸಲು ಕ್ರಮಕೈಗೊಂಡಿದ್ದು, ತಾಂತ್ರಿಕ ಸಮಿತಿಯ ನಿರ್ಧಾರದ ಪ್ರಕಾರ ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು.

ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಮುನ್ಸೀಫ್ ಮತ್ತು ಜೆ.ಎಂ.ಎಫ್.ಸಿ. ಕಟ್ಟಡ

1187 (844): ಶ್ರೀ ಟಿ.ಬಿ. ಜಯಚಂದ್ರ (ಕಳ್ಳಂಬೆಳ್ಳ):–

ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಚಿಕ್ಕನಾಯಕನಹಳ್ಳಿ ತಾಲ್ಲೂಕಿಗೆ ಮುನ್ಸೀಫ್ ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯದ ಕಟ್ಟಡಕ್ಕಾಗಿ ಮನವಿ ನೆನೆಗುದಿಯಲ್ಲಿರುವುದು ಸರ್ಕಾರಕ್ಕೆ ತಿಳಿದಿದೆಯೇ;